ಮಹಿಳಾ ವಸತಿ ನಿಲಯಕ್ಕೆ ಕಟ್ಟಡ ನಿರ್ಮಾಣ

5154 (5350); ಶ್ರೀ ಮಾನಪ್ಪ ಡಿ. ವಜ್ಜಲ್ (ಲಿಂಗಸಗೂರು)

ಅ) ರಾಯಚೂರು ಜಿಲ್ಲೆ ಲಿಂಗಸೂಗೂರು ತಾಲ್ಲೂಕಿನ ಪೈದೊಡ್ಡಿ ಗ್ರಾಮದಲ್ಲಿ ಮಹಿಳಾ ವಸತಿ ನಿಲಯಕ್ಕೆ ಸೂಕ್ತ ಕಟ್ಟಡ ಇಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಸರ್ಕಾರವು ಪ್ರಸಕ್ತ ಸಾಲಿನಲ್ಲಿ ಮಹಿಳಾ ವಸತಿ ನಿಲಯದ ಕಟ್ಟಡ ನಿರ್ಮಾಣಕ್ಕಾಗಿ ಅವಶ್ಯವಿರುವ ಅನುದಾನ ಬಿಡುಗಡೆ ಮಾಡಲು ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ವಿವರಗಳನ್ನು ನೀಡುವುದು)?

ಶ್ರೀ ಹೆಚ್. ಆಂಜನೇಯ (ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ರಾಯಚೂರು ಜಿಲ್ಲೆ, ಲಿಂಗಸೂಗೂರು ತಾಲ್ಲೂಕಿನ ಪೈದೊಡ್ಡಿ ಗ್ರಾಮದಲ್ಲಿ ಪರಿಶಿಷ್ಟ ಜಾತಿ/ಪಂಗಡದ ಯಾವುದೇ ಮಹಿಳಾ ವಸತಿ ನಿಲಯವನ್ನು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುತ್ತಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ

ಆಯುರ್ವೇದ ಆಸ್ಪತ್ರೆ ಮತ್ತು ಕಾಲೇಜು ಪ್ರಾರಂಭಿಸುವುದು

5155 (5351); ಶ್ರೀ ಮಾನಪ್ಪ ಡಿ. ವಜ್ಜಲ್ (ಲಿಂಗಸುಗೂರು)

ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ರಾಯಚೂರು ಜಿಲ್ಲೆಯ ಲಿಂಗಸುಗೂರು ತಾಲ್ಲೂಕಿನ ಕೇಂದ್ರ ಸ್ಥಾನದಲ್ಲಿ ಆಯುರ್ವೇದ ಆಸ್ಪತ್ರೆ ಇಲ್ಲದೆ ದೂರದ ಪ್ರದೇಶಕ್ಕೆ ಹೋಗಿ ಚಿಕಿತ್ಸೆ

ಪಡೆಯಬೇಕಾಗಿರುವುದರಿಂದ ರೋಗಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಲಿಂಗಸುಗೂರು ತಾಲ್ಲೂಕಿನ ಕೇಂದ್ರ ಸ್ಥಾನದಲ್ಲಿ ಆಯುರ್ವೇದ ಆಸ್ಪತ್ರೆ ಹಾಗೂ ಕಾಲೇಜನ್ನು ಪ್ರಾರಂಭಿಸಲು ಸರ್ಕಾರಕ್ಕಿರುವ ತೊಂದರೆಗಳೇನು; (ಪೂರ್ಣ ವಿವರ ನೀಡುವುದು)?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ನಿಜವಲ್ಲ.

ಆ) 2013–14ನೇ ಸಾಲಿನ ಬಜೆಟ್ ಭಾಷಣದಲ್ಲಿ ಘೋಷಿಸಿದಂತೆ ಈಗಾಗಲೇ ಲಿಂಗಸುಗೂರು ತಾಲ್ಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ 10 ಹಾಸಿಗೆಗಳ ಆಯುಷ್ ಘಟಕವನ್ನು ಪ್ರಾರಂಭಿಸಲು ಸರ್ಕಾರವು ಮಂಜೂರಾತಿ ನೀಡಿದ್ದು, ತಾತ್ಕಾಲಿಕವಾಗಿ ಆಯುರ್ವೇದ ಆಸ್ಪತ್ರೆಯನ್ನು ಪ್ರಾರಂಭಿಸಿ ಸಾರ್ವಜನಿಕರಿಗೆ ಆಯುಷ್ ಪದ್ಧತಿಗಳ ಚಿಕಿತ್ಸಾ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ. ಪ್ರತಿ ತಿಂಗಳು ಸರಾಸರಿ 150 ರಿಂದ 200 ಹೊರರೋಗಿಗಳು ಈ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆಯುತ್ತಿರುತ್ತಾರೆ. ಈ ಆಸ್ಪತ್ರೆಗೆ ಅಗತ್ಯ ಹುದ್ದೆಗಳ ಸೃಜಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದ್ದು, ಹುದ್ದೆಗಳ ಸೃಜನೆಯಾದ ನಂತರ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ ಆಯುರ್ವೇದ ಆಸ್ಪತ್ರೆಯನ್ನು ಪೂರ್ಣಪ್ರಮಾಣದಲ್ಲಿ ಕಾರ್ಯಾರಂಭಿಸುವ ಪ್ರಕ್ರಿಯೆ ಕೈಗೊಳ್ಳಲಾಗುವುದು.